**ಓ.ಎಸ್. ನಂ. 83/2022** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 12.9.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿಯರ ಪರ ಶ್ರೀ ಡಿ.ಆರ್.ಎಂ ವಕೀಲರಿಂದಃ</u>**

ನಿಪಿ8 ರಲ್ಲಿ ಸದರಿ ಕ್ರಯಪತ್ರವನ್ನು ಬರೆದುಕೊಟ್ಟಿರುವ ನಿಂಗಮ್ಮ ರವರನ್ನು ಈ ದಾವೆಯಲ್ಲಿ ಸೇರಿಸಿರುವುದಿಲ್ಲ. 1 ನೇ ಪ್ರತಿವಾದಿಯ ತಂದೆ ಕುಂಟೇಗೌಡ ಈಗ ತೀರಿಕೊಂಡಿರುತ್ತಾರೆ. ಸದರಿ ಕುಂಟೇಗೌಡರವರಿಗೆ 6 ಜನ ಮಕ್ಕಳಿದ್ದು ಅವರನ್ನು ಈ ದಾವೆಯಲ್ಲಿ ಪಕ್ಷಗಾರರಾಗಿ ಮಾಡಿರುವುದಿಲ್ಲ. ದಾವ 5 ನೇ ಐಟಂ ಆಸ್ತಿಯು ಮೊದಲು ಕುಂಟೇಗೌಡರ ಹೆಸರಿನಲ್ಲಿದ್ದ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಾನು ದಾವಆಸ್ತಿಗಳಿಗೆ ಸಂಬಂಧಪಟ್ಟಂತೆ ಯಾವುದೇ ಮೂಲ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ9 ರ ಪ್ರಕಾರ ದಾವ 5 ನೇ ಐಟಂ ಆಸ್ತಿಯು 1 ನೇ ಪ್ರತಿವಾದಿಯ ಹೆಸರಿನಲ್ಲಿದ್ದು ಅವರಿಂದ 3 ನೇ ಪ್ರತಿವಾದಿಯ ಹೆಸರಿಗೆ ಖಾತೆ ಬದಲಾವಣೆಯಾಗಿರುತ್ತದೆ. ದಾವ ಆಸ್ತಿಗಳಿಗೆ ಸಂಬಂಧಪಟ್ಟಂತೆ ನಾನು ಈಗಾಗಲೇ ಹಕ್ಕು ನಿವೃತ್ತಿ ಪತ್ರವನ್ನು ಬರೆದುಕೊಟ್ಟಿರುವುದರಿಂದ ಮತ್ತು ದಾವಆಸ್ತಿಗಳು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಯಾಗಿರುವುದರಿಂದ ದಾವಆಸ್ತಿಗಳಲ್ಲಿ ನಾನು ಭಾಗ ಕೇಳಲು ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯಿಂದ ಅಕ್ರಮ ಲಾಭ ಪಡೆಯಲು ಸುಳ್ಳು ದಾವೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ.